**Bangalore**
**Regional News**
**14.05.2025 / 6.40pm**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧. ಕಂದಾಯ ಇಲಾಖೆಯನ್ನು ಮುಂದಿನ ತಿಂಗಳೊಳಗೆ ಸಂಪೂರ್ಣ ಗಣಕೀಕರಣ ಗೊಳಿಸಲಾಗುವುದು - ಸಚಿವ ಕೃಷ್ಣಭೈರೆಗೌಡ

೨. ರಾಜ್ಯದ ಹಲವೆಡೆ ತುರ್ತು ಪರಿಸ್ಥಿತಿ ನಿರ್ವಹಣೆ ಜಾಗೃತಿ ಮೂಡಿಸಲು ರಕ್ಷಣಾತ್ಮಕ ಅಣಕು ಪ್ರದರ್ಶನ

೩. ಕೇಂದ್ರ ಪುರಸ್ಕೃತ ಯೋಜನೆಗಳಿಗೆ ಬಾಕಿಯಿರುವ ಕೇಂದ್ರದ ಪಾಲು ಬಿಡುಗಡೆಗೊಳಿಸಲು ಸಂಸದರು ಪ್ರಯತ್ನಿಸಬೇಕು - ಮುಖ್ಯಮಂತ್ರಿ ಸಿದ್ಧರಾಮಯ್ಯ

೪. ತುಮಕೂರಿನಲ್ಲಿ ನಿವೇಶನಗಳಿಗೆ ಎ ಖಾತೆ ಬಿ ಖಾತೆ ಮಾಡಿಸಲು ೩ ತಿಂಗಳ ಅವಧಿ ವಿಸ್ತರಣೆ

೫. ಯೋಧರಿಗೆ ಆತ್ಮಸ್ಥೈರ್ಯ ತುಂಬಲು ರಾಜ್ಯಾದ್ಯಂತ ನಾಳೆಯಿಂದ ತಿರಂಗ ಯಾತ್ರೆ

**<><*<><>*><>**

ಕಂದಾಯ ಇಲಾಖೆಯನ್ನು ಸಂಪೂರ್ಣ ಗಣಕೀಕರಣಗೊಳಿಸಲಾಗುತ್ತಿದ್ದು, ಮುಂದಿನ ತಿಂಗಳಿನಿಂದ ಮನೆಯಲ್ಲಿ ಕುಳಿತು ಸಾರ್ವಜನಿಕರು ಎಲ್ಲ ದಾಖಲೆಗಳನ್ನು ಆನ್ಲೈನ್ ಮೂಲಕ ಪಡೆದುಕೊಳ್ಳಬಹುದಾಗಿದೆ ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ಹೇಳಿದ್ದಾರೆ.

ಹಾವೇರಿ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿಂದು ಪ್ರಗತಿ ಪರಿಶೀಲನಾ ಸಭೆ ನಡೆಸಿ ನಂತರ ಮಾಧ್ಯಮವರೊಂದಿಗೆ ಮಾತನಾಡಿದ ಅವರು, ಎಲ್ಲ ತಾಲ್ಲೂಕು ಕಚೇರಿಗಳ ದಾಖಲೆಗಳನ್ನು ಗಣಕೀಕೃತಗೊಳಿಸುವುದನ್ನು ಕಡ್ಡಾಯಗೊಳಿಸಲಾಗಿದೆ. ರಾಜ್ಯ ಎಲ್ಲ ತಾಲ್ಲೂಕು ಕಚೇರಿಯ ದಾಖಲೆಗಳು ಜನರ ಬೆರಳ ತುದಿಯಲ್ಲಿ ಇರುವಂತೆ ಮಾಡುವುದು ನಮ್ಮ ಉದ್ದೇಶ. ಅದಕ್ಕಾಗಿ ಅಗತ್ಯವಿರುವ ತಂತ್ರಜ್ಞಾನವನ್ನು ಬಳಕೆ ಮಾಡಲಾಗುತ್ತಿದೆ ಎಂದರು.

ರಾಜ್ಯದಲ್ಲಿ ಹಲವು ದಶಕಗಳಿಂದ ೫೨ ಲಕ್ಷಕ್ಕೂ ಹೆಚ್ಚು ಆಸ್ತಿಗಳು ಮೃತರ ಹೆಸರಿನಲ್ಲೇ ಮುಂದುವರೆಯುತ್ತಿದ್ದು, ಪೌತಿ ಖಾತೆ ಆಗದೆ ವಾರಸುದಾರರು ತೀವ್ರ ಸಮಸ್ಯೆ ಎದುರಿಸುತ್ತಿದ್ದಾರೆ. ಮಾಲೀಕತ್ವದ ಹಕ್ಕು ಹಾಗೂ ತನ್ಮೂಲಕ ಪಡೆಯಬೇಕಾಗಿದ್ದ ಸರ್ಕಾರಿ ಸೌಲಭ್ಯಗಳಿಂದ ವಂಚಿತರಾಗುತ್ತಿದ್ದು, ಈ ಸಮಸ್ಯೆ ಬಗೆಹರಿಸಲು ರಾಜ್ಯಾದ್ಯಂತ ಪೌತಿ ಖಾತೆ ಅಭಿಯಾನ

ಆರಂಭಿಸಲು ಕಂದಾಯ ಇಲಾಖೆ ಸಿದ್ಧತೆ ನಡೆಸಿದೆ. ಹಾವೇರಿ ಜಿಲ್ಲೆಯಲ್ಲಿ ೧ ಲಕ್ಷ ೭ ಸಾವಿರ ಆಸ್ತಿಗಳು ಮೃತರ ಖಾತೆಯಲ್ಲಿ ಮುಂದುವರೆದಿದ್ದು ಪಾತಿ ಖಾತೆಯಾಗಿಲ್ಲ. ಇದನ್ನು ಗಂಭೀರವಾಗಿ ಪರಿಗಣಿಸಿ ಪ್ರತಿ ತಿಂಗಳು ಪ್ರತಿ ತಾಲ್ಲೂಕಿನಲ್ಲಿ ಮೂರು ಗ್ರಾಮಗಳಲ್ಲಿ ಅದಾಲತ್ ಮಾದರಿಯಲ್ಲಿ ಕಂದಾಯ ಇಲಾಖೆ ಅಧಿಕಾರಿಗಳು ಒಪ್ಪಿಗೆ ಸೂಚಿಸುವ ಕುಟುಂಬಗಳ ಪೊತಿ ಖಾತೆ ಬದಲಾವಣೆ ಮಾಡಿಕೊಡಲು ಸೂಚಿಸಲಾಗಿದೆ ಎಂದರು.

<><*<><>*><>

ಜಿಲ್ಲೆಯಲ್ಲಿ ಸಂಭವಿಸುವ ಯಾವುದೇ ರೀತಿಯ ಪ್ರಾಕೃತಿಕ ವಿಕೋಪ ಸೇರಿದಂತೆ ಎಲ್ಲಾ ತುರ್ತು ಸಂದರ್ಭಗಳಲ್ಲಿ ಗಾಯಾಳು ಸಂತ್ರಸ್ಥರಿಗೆ ವೈದ್ಯಕೀಯ ಸೇವೆ ನೀಡುವಲ್ಲಿ ಯಾವುದೇ ವಿಳಂಬವಾಗದಂತೆ ಸದಾ ಸನ್ನದ್ದ ಸ್ಥಿತಿಯಲ್ಲಿರುವಂತೆ ವೈದ್ಯಕೀಯ ಸಿಬ್ಬಂದಿಗಳಿಗೆ ಉತ್ತರಕನ್ನಡ ಜಿಲ್ಲಾಧಿಕಾರಿ ಕೆ.ಲಕ್ಷ್ಮಿಪ್ರಿಯ ಸೂಚನೆ ನೀಡಿದರು. ಅವರು ಕಾರವಾರದ ಇಲಾಖೆ , ಕೊಂಕಣ ರೈಲ್ವೆ ಹಾಗೂ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ ಸಹಯೋಗದಲ್ಲಿ ನಡೆದ , ವಿಪತ್ತು ಸಂದರ್ಭದಲ್ಲಿ ತುರ್ತು ವೈದ್ಯಕಿಯ ನೆರವು ಒದಗಿಸುವ ಕುರಿತ ತರಬೇತಿ ಕಾರ್ಯಗಾರ ಉದ್ಘಾಟಿಸಿ ಮಾತನಾಡಿದರು.

ಜಿಲ್ಲೆಯಲ್ಲಿ ಅನೇಕ ಸೂಕ್ಷ್ಮ ಸ್ಥಳಗಳಿದ್ದು ಮಳೆಗಾಲ ಸಂದರ್ಭದಲ್ಲಿ ಗುಡ್ಡ ಕುಸಿತ ಸೇರಿದಂತೆ ಇತರೇ ಯಾವುದೇ ರೀತಿಯ ಪ್ರಾಕೃತಿಕ ವಿಕೋಪ ಮತ್ತು ಇನ್ನಿತರ ತುರ್ತು ಸಂದರ್ಭಗಳಲ್ಲಿ ಸಂತ್ರಸ್ಥರಾಗುವ ಜಿಲ್ಲೆಯ ಸಾರ್ವಜನಿಕರಿಗೆ ವೈದ್ಯಕೀಯ ಚಿಕಿತ್ಸೆ ನೀಡುವಲ್ಲಿ ಯಾವುದೇ ವಿಳಂಬವಾಗುವುದನ್ನು ತಡೆಯಲು ಇಲ್ಲಿರುವ ಮಾನವ ಸಂಪನ್ಮೂಲವನ್ನು ಸೂಕ್ತ ರೀತಿಯಲ್ಲಿ ಬಳಸಿಕೊಂಡು, ಅವರಿಗೆ ಸೂಕ್ತ ತರಬೇತಿ ನೀಡುವ ಮೂಲಕ, ವೈದ್ಯಕೀಯ ನೆರವು ಒದಗಿಸಲು ಸಾಧ್ಯವಾಗಲಿದೆ ಎಂದರು.

<><*<><>*><>

ದೇಶದಲ್ಲಿ ಯುದ್ಧದ ಪರಿಸ್ಥಿತಿ ಸಂದರ್ಭದಲ್ಲಿ ತುರ್ತು ಪರಿಸ್ಥಿತಿಯ ನಿರ್ವಹಣೆ, ಜನರಲ್ಲಿ ಭಯಮುಕ್ತ ವಾತಾವರಣ ನಿರ್ಮಿಸಲು ಚಿಕ್ಕೋಡಿ ಹಾಗೂ ಬೆಳಗಾವಿ ಭಾಗದಲ್ಲಿ ಸದ್ಯದಲ್ಲೇ ರಕ್ಷಣಾತ್ಮಕ ಅಣುಕು ಪ್ರದರ್ಶನ ಏರ್ಪಡಿಸಬೇಕು ಎಂದು ಬೆಳಗಾವಿ ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಇಂದು ನಡೆದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ ಸಭೆಯಲ್ಲಿ ಮಾತನಾಡಿದ ಅವರು, ಅಣಕು ಪ್ರದರ್ಶನಕ್ಕೆ ಸೂಚಿಸಿದ ಸ್ಥಳಗಳಲ್ಲಿ ಆಂತರಿಕ ಭದ್ರತೆ ಕುರಿತು ಪರಿಶೀಲಿಸಬೇಕು. ಅಣುಕು ಪ್ರದರ್ಶನಕ್ಕೆ ಸಮಯ ಅವಧಿ ನಿಗದಿಪಡಿಸಿ, ಸಂಬಂಧಿಸಿದ ಇಲಾಖೆಗಳಾದ ಪೊಲೀಸ್, ಆರೋಗ್ಯ ಇಲಾಖೆ, ಅಗ್ನಿ ಶಾಮಕ ದಳ, ರಸ್ತೆ ಸಾರಿಗೆ ಇಲಾಖೆಯ ಸಮನ್ವಯದೊಂದಿಗೆ ಕಾರ್ಯ ನಿರ್ವಹಿಸಬೇಕು ಎಂದು ಹೇಳಿದರು.

<><*<><>*><>

ಕೇಂದ್ರ ಪುರಸ್ಕೃತ ಯೋಜನೆಗಳಿಗೆ ಬಾಕಿಯಿರುವ ಸುಮಾರು ೪೧೯೫ ಕೋಟಿ ರೂ. ಗಳ ಕೇಂದ್ರದ ಪಾಲು ಬಿಡುಗಡೆಯಾಗಿಲ್ಲ. ಈ ದಿಸೆಯಲ್ಲಿ ರಾಜ್ಯದ ಸಂಸದರು, ರಾಜ್ಯಸಭಾ ಸದಸ್ಯರು ಕೇಂದ್ರವನ್ನು ಒತ್ತಾಯಿಸಿ ಬಾಕಿ ಅನುದಾನವನ್ನು ತರಲು ಪ್ರಯತ್ನಿಸಬೇಕೆಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಅವರು ಇಂದು ವಿಧಾನಸೌಧದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿ

ಕೇಂದ್ರ ಪುರಸ್ಕೃತ ಯೋಜನೆಗಳಿಗೆ ಬಾಕಿಯಿರುವ ಅನುದಾನವನ್ನು ಒದಗಿಸುವಂತೆ ಪ್ರಧಾನಮಂತ್ರಿಯವರನ್ನು, ಕೇಂದ್ರ ವಿತ್ತಸಚಿವರನ್ನೂ ಈಗಾಗಲೇ ಭೇಟಿ ಮಾಡಿ ಮನವಿ ಸಲ್ಲಿಸಿದ್ದರ ಬಗ್ಗೆ ಮುಖ್ಯಮಂತ್ರಿಗಳು ತಿಳಿಸಿದರು.

ಕೇಂದ್ರ ಪುರಸ್ಕೃತ ಯೋಜನೆಗಳ ಪ್ರಗತಿ ಪರಿಶೀಲಿಸಲು ರಚಿಸಲಾದ ಮುಖ್ಯಮಂತ್ರಿಗಳ ಅಧ್ಯಕ್ಷತೆಯ ರಾಜ್ಯ ಮಟ್ಟದ ದಿಶಾ ಸಮಿತಿ ಸಭೆಯಲ್ಲಿ ಸುಮಾರು ೬೭ ಕೇಂದ್ರ ಪುರಸ್ಕೃತ ಯೋಜನೆಗಳ ಪ್ರಗತಿಪರಿಶೀಲನೆ ನಡೆಸಲಾಗಿದೆ. ಕರ್ನಾಟಕದಲ್ಲಿ ಕೇಂದ್ರ ಪುರಸ್ಕೃತ ಯೋಜನೆಗಳಿಗೆ ೪೬೮೫೯ ಕೋಟಿ ಖರ್ಚು ಮಾಡಲಾಗುತ್ತಿದೆ. ೨೦೨೪-೨೫ರ ಸಾಲಿನಲ್ಲಿ ಕೇಂದ್ರ ಪುರಸ್ಕೃತ ಯೋಜನೆಗಳಡಿ ರಾಜ್ಯದ ಅನುದಾನ ೨೪೯೬೦ ಕೋಟಿ ರೂಪಾಯಿಗಳು, ಕೇಂದ್ರದ ಅನುದಾನ ೨೨೭೫೮ಕೋಟಿ ರೂಪಾಯಿಗಳಿದ್ದು ಕೇಂದ್ರದಿಂದ ೧೮೫೬೧ಕೋಟಿ ಮಾತ್ರ ಬಿಡುಗಡೆ ಆಗಿದೆ ೪೧೯೫ ಕೋಟಿ ರೂಪಾಯಿಗಳು ಬಿಡುಗಡೆ ಆಗಿರುವುದಿಲ್ಲ ಎಂದರು.

<><*<><>*><>

ಅಪರೇಷನ್ ಸಿಂದೂರ್ ಸಮಯದಲ್ಲಿ ದೇಶದ ಜನ ನಮ್ಮ ಸೈನಿಕರ ಆತ್ಮಸ್ಥೈರ್ಯ ಹೆಚ್ಚಿಸುವಲ್ಲಿ ಒಗ್ಗಾಟ್ಟಾಗಿ ನಿಂತು ಬೆಂಬಲಿಸಿದ್ದಾರೆ. ನಮ್ಮ ಜನರ ದೇಶಪ್ರೇಮ ಮತ್ತು ಏಕತೆ ಹೆಮ್ಮೆ ಪಡುವಂತಹದು. ಈ ಸಂದರ್ಭದಲ್ಲಿ ಆಕಾಶವಾಣಿ ವಿಶೇಷವಾಗಿ ದೇಶಪ್ರೇಮ ಉದ್ದೀಪಿಸುವ ಸರಣಿ ಕಾರ್ಯಕ್ರಮಗಳನ್ನು ಪ್ರಸಾರ ಮಾಡಲಿದೆ. ಈ ಸಂದರ್ಭದಲಿ ನಮ್ಮ ಸೇನಾ ಸಿದ್ಧತೆಯ ಕುರಿತಾಗಿ ರಕ್ಷಣಾ ವಿಷಯದ ಹಿರಿಯ ಲೇಖಕರು ಮತ್ತು ಸೈಬರ್ ಭದ್ರತಾ ತಜ್ಞರಾದ ಉದಯ್ ಶಂಕರ್ ಪುರಾಣಿಕ್ ಆಕಾಶವಾಣಿಯೊಂದಿಗೆ ಮಾತಾನಾಡಿದ್ದಾರೆ.

<><*<><>*><>

ತುಮಕೂರು ನಗರ  ಪ್ರದೇಶ ವ್ಯಾಪ್ತಿಯಲ್ಲಿ ಮನೆ, ನಿವೇಶನಗಳಿಗೆ ಎ-ಖಾತೆ ಮತ್ತು ಬಿ-ಖಾತೆ ಮಾಡಿಕೊಡುವ ಅವಧಿಯನ್ನು ಮತ್ತೆ ೩ ತಿಂಗಳ ಕಾಲ ವಿಸ್ತರಣೆ ಮಾಡಲಾಗಿದೆ ಎಂದು ಪೌರಾಡಳಿತ ಹಾಗೂ ಹಜ್ ಖಾತೆ ಸಚಿವ ರಹೀಮ್ ಖಾನ್ ತಿಳಿಸಿದರು.

ತುಮಕೂರು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲೆಯ ಪುರಸಭೆ ಹಾಗೂ ಪಟ್ಟಣ ಪಂಚಾಯ್ತಿಗಳ ಪ್ರಗತಿ ಪರಿಶೀಲನಾ ಸಭೆ ನಡೆಸಿದ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬಡವರ ಮನೆ, ನಿವೇಶನಗಳಿಗೆ ದಾಖಲಾತಿ ಮಾಡಿಕೊಡುವ ಸಲುವಾಗಿ ಬಿ ಖಾತೆಯನ್ನು ಜಾರಿಗೆ ತರಲಾಗಿದ್ದು, ಈಗಾಗಲೇ ೩ ತಿಂಗಳ ಅವಧಿ ಮುಕ್ತಾಯಗೊಂಡಿದೆ. ರಾಜ್ಯದಲ್ಲಿ ಶೇ.೫೦ರಷ್ಟು ಮಾತ್ರ ಬಿ ಖಾತೆಗಳಾಗಿರುವ ಹಿನ್ನೆಲೆಯಲ್ಲಿ ಉಳಿದವರಿಗೂ ಅನುಕೂಲ ಕಲ್ಪಿಸುವ ಸಲುವಾಗಿ ಬಿ ಖಾತೆ ಮಾಡಿಕೊಡುವ ಅವಧಿಯನ್ನು ಮತ್ತೆ ೩ ತಿಂಗಳ ಕಾಲ ರಾಜ್ಯ ಸರ್ಕಾರ ವಿಸ್ತರಿಸಿದೆ ಎಂದರು.

<><*<><>*><>

ಯೋಧರಿಗೆ ಆತ್ಮಸ್ಥೈರ್ಯ ತುಂಬಲು ಬಿಜೆಪಿಯಿಂದ ತಿರಂಗ ಯಾತ್ರೆ  ಆಯೋಜಿಸಲಾಗಿದೆ. ನಾಳೆಯಿಂದ ಬೆಂಗಳೂರು, ಮಂಗಳೂರು, ಬೆಳಗಾವಿ ಸೇರಿದಂತೆ ಪ್ರಮುಖ ಜಿಲ್ಲೆಗಳಲ್ಲಿ ತಿರಂಗಯಾತ್ರೆ ಆರಂಭವಾಗಲಿದೆ. ಜಿಲ್ಲೆ ಮತ್ತು ತಾಲೂಕು ಮಟ್ಟದಲ್ಲಿ ಯಾತ್ರೆ ನಡೆಯಲಿದ್ದು, ಸಾವಿರಾರು ಜನರು ಯಾತ್ರೆಯಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ತಿಳಿಸಿದ್ದಾರೆ.

<><*<><>*><>

ಬೆಂಗಳೂರು ಆಕಾಶವಾಣಿ ಸುದ್ದಿ ವಿಭಾಗ, ಆಪರೇಷನ್ ಸಿಂದೂರ್ ಮತ್ತು ಕದನ ವಿರಾಮ ಕುರಿತಂತೆ ಸಿದ್ಧಪಡಿಸಿದ ವಿಶೇಷ ಸಂವಾದ ಕಾರ್ಯಕ್ರಮ ಇಂದು ರಾತ್ರಿ ೧೦.೩೦ಕ್ಕೆ ಪ್ರಸಾರವಾಗಲಿದೆ. ರಕ್ಷಣಾ ವಿಷಯದ ಹಿರಿಯ ಲೇಖಕರು ಮತ್ತು ಸೈಬರ್ ಭದ್ರತಾ ತಜ್ಞರಾದ ಉದಯ್ ಶಂಕರ್ ಪುರಾಣಿಕ್ ಸಂವಾದದಲ್ಲಿ ಭಾಗಿಯಾಗಲಿದ್ದು ಹಿರಿಯ ಪತ್ರಕರ್ತ ನಾರಾಯಣಸ್ವಾಮಿ ಬಿ.ಎಸ್. ಕಾರ್ಯಕ್ರಮ ನಡೆಸಿಕೊಡಲಿದ್ದಾರೆ.

<><*<><>*><>

ಕೃಷಿ ಸಚಿವ ಎನ್. ಚಲುವರಾಯಸ್ವಾಮಿ ಅವರು, ಇಂದು ಬೆಳಿಗ್ಗೆ ಧಾರವಾಡ ಜಂಟಿ ಕೃಷಿ ನಿರ್ದೇಶಕರ ಕಚೇರಿ ಆವರಣದಲ್ಲಿ ನೂತನವಾಗಿ ನಿರ್ಮಿಸಿರುವ ಕೃಷಿಯಲ್ಲಿ ಕೃತಕ ಬುದ್ಧಿಮತ್ತೆ ಕೇಂದ್ರದ ನೂತನ ಕಟ್ಟಡ ಹಾಗೂ ಜಿಲ್ಲಾ ಕೃಷಿ ತರಬೇತಿ ಕೇಂದ್ರದ ನೂತನ ಕಟ್ಟಡ ಮತ್ತು ಜೈವಿಕ ಗೊಬ್ಬರ ಗುಣ ನಿಯಂತ್ರಣ ಪ್ರಯೋಗಾಲಯದ ಕಟ್ಟಡವನ್ನು ಉದ್ಘಾಟಿಸಿದರು.

<><*<><>*><>